(ಲೇಖಾನುದಾನದಲ್ಲಿ ಮಂಜೂರಾದ ಮೊತ್ತವೂ ಸೇರಿದಂತೆ) ಮಂಜೂರು ಮಾಡುವುದು''

1994ರ ಕರ್ನಾಟಕ ಧನ ವಿನಿಯೋಗ (ನಂ.3) ನಿಧೇಯಕ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1994ರ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೆನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, ''1994ರ ಕರ್ನಾಟಕ ಧನ ವಿನಿಯೋಗ 9ನಂ.3 ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು ''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ವಿಧೇಯಕವನ್ನು ಮಂಡಿಸಲು ಅನುಮತಿ ನೀಡಲಾಯಿತು

ಶ್ರೀ ಎಂ. ವೀರಪ್ಪ ಮೊಯಿಲಿ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1994ರ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇವೆ.

ಅನುಬಂಧ I

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ.

1994ರ ಕರ್ನಾಟಕ ಧನ ವಿನಿಯೋಗ (ನಂ.3) ವಿದೇಯಕ ಪರ್ಯಾವಾಲೋಚನಾ ಪ್ರಸ್ತಾವ

ಶ್ರೀ ಎಂ. ವೀರಪ್ಪಮೊಯಿಲಿ (ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, 1994ರ ಕರ್ನಾಟಕ ಧನ ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋರುತ್ತೇನೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, ''1994ರ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಪರ್ಯಾಲೋಚಿಸುವುದು''

ಪ್ರಸ್ತಾವ ಅಂಗೀಕರಿಸ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು ಖಂಡ 2 ಮತ್ತು 3

ಅಧ್ಯಕ್ಷರು : ''ಖಂಡ 2 ಮತ್ತು 3 ಈ ವಿಧೇಯಕದ ಅಂಗವಾಗಿರುತ್ತದೆ''

ಪ್ರಸ್ತಾವ ಅಂಗೀಕರಿಸ್ಪಟ್ಟಿತು

(ಖಂಡ 2 ಮತ್ತು 3 ನ್ನು ಈ ವಿಧೇಯಕವನ್ನು ಸೇರಿಸಲ್ಪಟ್ಟಿತು)

ಖಂಡ 1 ಇತ್ಯಾದಿ

ಅಧ್ಯಕ್ಷರು : ಪ್ರಸ್ತಾವ ಏನೆಂದರೆ ''ಮೊದಲನೆ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕ ಭಾಗವಾಗಿರುತ್ತದೆ ''

ಪ್ರಸ್ತಾವವನ್ನು ಅಂಗೀಕರಿಸಲಾಯಿತು

(ಮೊದಲನೆ ಖಂಡ, ಧೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆಗಳನ್ನು ಈ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವವನ್ನು ಅಂಗೀಕಾರಿಸಲಾಯಿತು

ಶ್ರೀ ಎಂ.ವೀರಪ್ಪ ಮೊಯಿಲಿ (ಮುಖ್ಯಮಂತ್ರಿ) : ಮಾನ್ಯ ಅಧ್ಯಕ್ಷರೆ, 1994ರ ಕರ್ನಾಟಕ ಧನ ವಿನಿಯೋಗ (ನಂ. 3) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ , ''1994ರ ಕರ್ನಾಟಕ ಧನ ವಿನಿಯೋಗ (ನಂ.3) ವಿಧೇಯಕವನ್ನು ಅಂಗೀಕರಿಸುವುದು''

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು

ಪ್ರಕಟನೆ

ಅಧ್ಯಕ್ಷರು ಮಾನ್ಯ ಸಭಾಪತಿಯವರಿಂದ ಈ ಕೆಳಕಂಡ ಸಂದೇಶವು ಬಂದಿರುತ್ತದೆ. ಕರ್ನಾಟಕ ವಿಧಾನ ಪರಿಷತ್ತಿನ ಕಾರ್ಯವಿಧಾನ ಹಾಗೂ ನಡವಳಿಕೆಯ ನಿಯಮ 99ರ ಮೇರೆಗೆ ವಿಧಾನ ಪರಿಷತ್ತು ದಿನಾಂಕ 5ನೇ ಸೆಪ್ಟಂಬರ್, 1994 ರಂದು ಈ ಕೆಳಕಂಡ ವಿಧೇಯಕಗಳನ್ನು ಯಾವುದೇ ತಿದ್ದುಪಡಿಗಳಿಲ್ಲದೆ ಅನುಮೋದಿಸಿತೆಂದು ತಿಳಿಸುತ್ತಿದ್ದೇನೆ.

1. ಕರ್ನಾಟಕ ಬಾಡಿಗೆ ನಿಯಂತ್ರಣ (ತಿದ್ದುಪಡಿ) ವಿಧೇಯಕ, 1994.

2. ಕರ್ನಾಟಕ ಭೂಕುಂದಾಯ (ತಿದ್ದುಪಡಿ) ವಿಧೇಯಕ. 1994.

ನಾಳೆ ಶಾಸಕರ ದಿನಾಚರಣೆ. ಬೆಳಿಗ್ಗೆ 9 ಗಂಟೆಗೆ ಕಂಠೀರವ ಸ್ಟೇಡಿಯಂನಲ್ಲಿ ಕಾರ್ಯಕ್ರಮ. ತಾವುಗಳೆಲ್ಲರು ಇದಕ್ಕೆ ತಪ್ಪದೆ ಹಾಜರಾಗಬೇಕೆಂದು ನಾನು ತಮ್ಮಲ್ಲಿ ಕೇಳಿಕೊಳ್ಳುತ್ತೇನೆ. ಸಂಜೆ 6 ಗಂಟೆಗೆ ಸಾಂಸ್ಕೃತಿಕ ಕಾರ್ಯಕ್ರಮ. ಇದಕ್ಕೂ ಸಹ ತಾವುಗಳೆಲ್ಲರು ಹಾಜರಾಗಬೇಕೆಂದು ಕೇಳಿಕೊಳ್ಳುತ್ತೇನೆ. ಮಧ್ಯಾಹ್ನ ಮತ್ತು ರಾತ್ರಿ ಎರಡು ಸಮಯಗಳಲ್ಲಿ ಭೋಜನದ ವ್ಯವಸ್ಥೆಯನ್ನು ಮಾಡಲಾಗಿದೆ.